**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.**

**ಸಿ.ಸಿ. ನಂ. 1770/2021**

ದಿನಾಂಕಃ07-02-2026.

| | | |
|---|---|---|
| ಹೆಸರು | ನಾಗರಾಜ | ಸಿಡಬ್ಲ್ಯೂ- 10 |
| ತಂದೆ ಹೆಸರು | ಲೇಟ್ ತಿಮ್ಮಪ್ಪ | ಪಿ ಡಬ್ಲ್ಯೂ- 09 |
| ವಯಸ್ಸು | 59 ವರ್ಷ | |
| ಉದ್ಯೋಗ | ಎ ಎಸ್ ಐ | |
| ವಾಸಸ್ಥಳ | ಪರಶುರಾಂಪುರ | ಪ್ರಮಾಣ ವಚನ ಬೋಧಿಸಲಾಯಿತು. |

**ಮುಖ್ಯ ವಿಚಾರಣೆಃ ಮಾನ್ಯ ಎ.ಪಿ.ಪಿ. ರವರಿಂದಃ**

ಮೇ-2020 ರಿಂದ ಜೂನ್-2022 ರವರೆಗೆ ನಾನು ನಾಯಕನಹಟ್ಟಿ ಪೊಲೀಸ್ ಠಾಣೆಯಲ್ಲಿ ಎ ಎಸ್ ಐ ಅಂತ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 18.04.2021 ರಂದು ಚಾಸಾ-9 ರವರಿಂದ ಈ ಕೇಸಿನ ಕಡತವನ್ನು ಸ್ವೀಕರಿಸಿ ತನಿಖೆಯನ್ನು ಮುಂದುವರಿಸಿರುತ್ತೇನೆ. ದಿಃ21-07-2021 ರಂದು ಚಾಸಾ-1 ರವರ ಗಾಯದ ಪ್ರಮಾಣಪತ್ರವನ್ನು ಚಾಸಾ-8 ರವರಿಂದ ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ.

ಸಾಕ್ಷಿಗೆ ನಿಪಿಃ5 ರ ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.5(ಬಿ)ಅಂತಾ ಗುರುತಿಸಲಾಯಿತು. ಅದೇ ದಿನ ತನಿಖೆ ಪೂರ್ಣಗೊಂಡಿದ್ದು ಆರೋಪಿಯ ಮೇಲೆ ಸಾಕಷ್ಟು ಸಾಕ್ಷಿ ಪೂರವೆಗಳು ಇದ್ದ ಕಾರಣ ಅವರ ವಿರುದ್ದ ನ್ಯಾಯಾಲಯಕ್ಕೆ ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

**ಪಾಟೀ ಸವಾಲುಃ ಶ್ರೀ ಟಿ.ಟಿ., ಆರೋಪಿ ಪರ ವಕೀಲರಿಂದಃ**

ದಿಃ 18.04.2021 ರಂದು ಚಾಸಾ-9 ರವರಿಂದ ಈ ಕೇಸಿನ ಕಡತವನ್ನು ಸ್ವೀಕರಿಸಿ ತನಿಖೆಯನ್ನು ಮುಂದುವರಿಸಿಲ್ಲ ಎಂದರೆ ಸರಿಯಲ್ಲ. ಚಾಸಾ-8 ರವರಿಂದ ಚಾಸಾ-1 ರವರ ಗಾಯದ ಪ್ರಮಾಣಪತ್ರವನ್ನು ಸಂಜೆ 4-00 ಗಂಟೆಗೆ ಪಡೆದಿರುತ್ತೇನೆ. ಸದರಿ ವಿಚಾರವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ತನಿಖೆಯ ಕಾಲದಲ್ಲಿ ಆರೋಪಿಯ ವಿರುದ್ಧ ಯಾವ ಆರೋಪ ಸಾಬಿತಾಗದೇ ಇದ್ದರೂ ಸಹ ಚಾಸಾ-1 ರವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ದೋಷರೋಪಣಾ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ** ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಅಪರ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,

ನ್ಯಾಯಾಧೀಶರು, ಚಳ್ಳಕೆರೆ.